"2009ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಗ್ರಾಮಸಾರ ಚರಂಡಿ ವ್ಯವಸ್ಥೆ ಹಾಗೂ ಇತರೆ ಕೆಲವು ಕಾನೂನುಗಳು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಕಟ್ಟಾಸುಬ್ರಮಣ್ಯ ನಾಯ್ಡು (ವಸತಿ, ವಾರ್ತಾ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) : ಮಾನ್ಯ ಅಧ್ಯಕ್ಷರೆ, 2009ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಗ್ರಾಮಸಾರ ಚರಂಡಿ ವ್ಯವಸ್ಥೆ ಹಾಗೂ ಇತರೆ ಕೆಲವು ಕಾನೂನುಗಳು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : X ವಿಧೇಯಕವನ್ನು ಮಂಡಿಸಲಾಗಿದೆ. X.

ಅನುಬಂಧ – II

(ii) ಅಜೀಂ ಪ್ರೇಮ್‌ಜಿ ವಿಶ್ವವಿದ್ಯಾಲಯ ವಿಧೇಯಕ, 2010

ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ನಗರಾಭಿವೃದ್ಧಿ ಸಚಿವರು ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) ಅವರ ಪರವಾಗಿ) : ಮಾನ್ಯ ಅಧ್ಯಕ್ಷರೇ, 2010ನೇ ಸಾಲಿನ ಅಜೀಂ ಪ್ರೇಮ್‌ಜಿ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತಿದ್ದೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ:

"2010ನೇ ಸಾಲಿನ ಅಜೀಂ ಪ್ರೇಮ್‌ಜಿ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ನಗರಾಭಿವೃದ್ಧಿ ಸಚಿವರು ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) ಅವರ

ಪರವಾಗಿ) : ಮಾನ್ಯ ಅಧ್ಯಕ್ಷರೇ, 2010ನೇ ಸಾಲಿನ ಅಜೀಂ ಪ್ರೇಮ್‌ಜಿ ವಿಶ್ವವಿದ್ಯಾಲಯ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : X ವಿಧೇಯಕವನ್ನು ಮಂಡಿಸಲಾಯಿತು. X

ಅನುಬಂಧ – III

8. ಗಮನ ಸೆಳೆಯುವ ಸೂಚನೆ :

ವಿಷಯ : (1) ಬರಗಾಲಕ್ಕೆ ತುತ್ತಾಗಿರುವ ಶಿರಾ ತಾಲ್ಲೂಕಿನ ಕೆಲವು ಹೋಬಳಿಗಳಿಗೆ ಮಾತ್ರ ಬೆಳೆ ವಿಮೆಗೆ ಕ್ಲೈಮ್ ಮಾಡಲು ಸರ್ಕಾರವು ಬ್ಯಾಂಕ್‌ಗಳಿಗೆ ಕಳುಹಿಸಿರುವ ವರ್ತಮಾನ ಆದೇಶವನ್ನು ಹಿಂಪಡೆಯುವ ಬಗ್ಗೆ

ಶ್ರೀ ಟಿ.ಬಿ.ಜಯಚಂದ್ರ : ಬರಗಾಲಕ್ಕೆ ತುತ್ತಾಗಿರುವ ಶಿರಾ ತಾಲ್ಲೂಕಿನ ಕೆಲವು ಹೋಬಳಿಗಳಿಗೆ ಮಾತ್ರ ಬೆಳೆ ವಿಮೆಗೆ ಕ್ಲೈಮ್ ಮಾಡಲು ಸರ್ಕಾರವು ಬ್ಯಾಂಕ್‌ಗಳಿಗೆ ಕಳುಹಿಸಿರುವ ವರ್ತಮಾನ ಆದೇಶವನ್ನು ಹಿಂಪಡೆಯುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುತ್ತಿದ್ದೇನೆ.

ಅಧ್ಯಕ್ಷರು : ಸಚಿವರು ಉತ್ತರ ಕೊಡಿ.

ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) : ಅದು ಬೆಳೆ ವಿಮೆಗೆ ಸಂಬಂಧಪಟ್ಟಂತೆ ಇದೆ.

ಶ್ರೀ ಟಿ.ಬಿ.ಜಯಚಂದ್ರ : ನಾನು ಮಂತ್ರಿಯಾಗಿದ್ದೆ, ದಯಮಾಡಿ ಆ ರೀತಿ ಉತ್ತರ ಕೊಟ್ಟು escape ಆಗಬೇಡಿ. ಇದರಲ್ಲಿ ಬೆಳೆ ವಿಮೆ ಪ್ರಶ್ನೆ ಅಲ್ಲ. ನಾನು ಹಿಂದಿನ ಸಭೆಯಲ್ಲಿಯೂ ಸಹ ಇದರಲ್ಲಿ ಲೋಪವಾಗಿದೆ ಎಂದು ಹೇಳಿದ್ದಕ್ಕೆ ನೀವು ಏನು ಉತ್ತರ ಹೇಳಿದಿರಿ ಎಂದರೆ. ಈಗ ವಿಚಾರ ಪ್ರಸ್ತಾಪ ಈ ರೀತಿ ಇದೆ, 86 ತಾಲ್ಲೂಕುಗಳನ್ನು ಬರ ತಾಲ್ಲೂಕುಗಳೆಂದು ತಾವು ಘೋಷಣೆ ಮಾಡಿದ್ದೀರಿ. ಘೋಷಣೆ ಮಾಡಿದ ನಂತರ ನೀವು ಬ್ಯಾಂಕುಗಳಿಗೆ ಒಂದು circular ಕಳುಹಿಸಿದ್ದೀರಿ, ಏನೆಂದರೆ ಶೀರಾ ತಾಲ್ಲೂಕಿನಲ್ಲಿ ಯಾವುದು affected ಇದೆಯೋ ಅದನ್ನು ಬಿಟ್ಟು ಬೇರೆ ಹೋಬಳಿಗಳಿಗೆ ಮಾತ್ರ ಅನ್ವಯಿಸುತ್ತದೆ ಎಂದು ಹೇಳಲಾಗಿದೆ. ಇದು ಕೇವಲ ಶಿರಾ ತಾಲ್ಲೂಕಿಗೆ ಮಾತ್ರವಲ್ಲ, ಇಡೀ ರಾಜ್ಯಕ್ಕೆ ಅನ್ವಯಿಸುವಂತೆ ಮಾಡಿದ್ದೀರಿ.